ನಿರ್ದೇಶಕರ ಕಛೇರಿ
ಪೌರಾಡಳಿತ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ಫ್ಯಾಕ್ಸ್: 080-22863576 / 22861665
Email: dmablr@gmail.com
Website: www.municipaladmn.gov.in
9ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

ಸಂಖ್ಯೆ: 24224 ಡಿಎಂಎ 148 ಜಿಪಿಎಸ್ 2017-18 ದಿನಾಂಕ: 22/03/18

**ಇವರಿಗೆ**

ರಾಜ್ಯದ ಎಲ್ಲಾ ಯೋಜನಾ ನಿರ್ದೇಶಕರು
ಜಿಲ್ಲಾ ನಗರಾಭಿವೃದ್ಧಿ ಕೋಶ

**ಮಾನ್ಯರೆ,**

**ವಿಷಯ:** ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಉಸ್ತುವಾರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಕ್ಫ್ ಸಂಸ್ಥೆಗಳ ಆಸ್ತಿಗಳನ್ನು ಕಾನೂನು ಬಾಹಿರವಾಗಿ ಪರಭಾರೆಯಾಗುವುದನ್ನು ತಡೆಯಲು ಕ್ರಮ ಜರುಗಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಪತ್ರದ ಸಂ: ನಅಇ 22 ಜಿಇಎಲ್ 2018 ದಿನಾಂಕ.07.03.2018

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ರವರಿಂದ ಏಕ ಕಡತ ಪದ್ಧತಿಯಲ್ಲಿ ಸ್ವೀಕೃತವಾಗಿರುವ ವಿಷಯದ ಕಡೆ ಗಮನ ಸೆಳೆಯುತ್ತಾ, ಸದರಿ ಏಕ ಕಡತದಲ್ಲಿ ರಾಜ್ಯದ ಕಂದಾಯ ಇಲಾಖೆಯ ಆಸ್ತಿಗಳು ಮಾರಾಟವಾಗದಂತೆ ನಿರ್ವಹಿಸಲಾಗುತ್ತಿರುವ ತಂತ್ರಾಂಶದಲ್ಲಿ ವಕ್ಫ್ ಆಸ್ತಿಗಳನ್ನು ಸಹ ಸೇರಿಸಿಕೊಳ್ಳಲು ಸೂಕ್ತ ಆದೇಶ ಹೊರಡಿಸುವಂತೆ ಕೋರಲಾಗಿರುತ್ತದೆ. ಈ ಬಗ್ಗೆ ಪರಿಶೀಲಿಸಲಾಗಿ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ರವರ ಅಧ್ಯಕ್ಷತೆಯಲ್ಲಿ ದಿನಾಂಕ.03.08.2017ರಂದು ಜರುಗಿರುವ ಸಭೆಯಲ್ಲಿ ವಕ್ಫ್ ಆಸ್ತಿಗಳ ಖಾತೆ ಬದಲಾವಣೆಗೆ ಸಂಬಂಧಿಸಿದಂತೆ ಅಧೀನ ಅಧಿಕಾರಿಗಳಿಗೆ ಸುತ್ತೋಲೆಯನ್ನು ಹೊರಡಿಸಲು ಸೂಚಿಸಲಾಗಿರುತ್ತದೆ.

ಈ ಹಿನ್ನಲೆಯಲ್ಲಿ ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ರವರು ಕೋರಿರುವಂತೆ ಕಂದಾಯ ಇಲಾಖೆಯ ಆಸ್ತಿಗಳು ಮಾರಾಟವಾಗದಂತೆ ನಿರ್ವಹಿಸಲಾಗುತ್ತಿರುವ ತಂತ್ರಾಂಶದಲ್ಲಿ ವಕ್ಫ್ ಆಸ್ತಿಗಳನ್ನು ಸೇರಿಸಿಕೊಳ್ಳುವ ಬಗ್ಗೆ ಅಗತ್ಯ ಕ್ರಮವಹಿಸುವಂತೆ ಸರ್ಕಾರದ ಉಲ್ಲೇಖಿತ ಪತ್ರದಲ್ಲಿ ಕೋರಲಾಗಿತ್ತದೆ.

ಈ ಬಗ್ಗೆ ಪರಿಶೀಲಿಸಲಾಗಿ, ಕಂದಾಯ ಇಲಾಖೆಯ ಆಸ್ತಿಗಳು ಮಾರಾಟವಾಗದಂತೆ ಈಗಾಗಲೇ ಇ-ಸ್ವತ್ತು ತಂತ್ರಾಂಶದಲ್ಲಿ ಅಳವಡಿಸಿಕೊಳ್ಳಲು ಕ್ರಮವಹಿಸಲಾಗಿರುತ್ತದೆ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸರ್ಕಾರಿ ಸ್ವತ್ತುಗಳು ಹಾಗೂ ವಕ್ಫ್ ಬೋರ್ಡ್ ಇಲಾಖೆಯ ಸ್ವತ್ತುಗಳು ಅನಧಿಕೃತವಾಗಿ ವರ್ಗಾವಣೆಯಾಗದಂತೆ ಸಂಬಂಧಪಟ್ಟ ಆಯುಕ್ತರು/ಪೌರಾಯುಕ್ತರು/ಮುಖ್ಯಾಧಿಕಾರಿಗಳ ಸಂರಕ್ಷಿಸುವುದು ಕರ್ತವ್ಯವಾಗಿರುತ್ತದೆ. ಆದ್ದರಿಂದ ಸ್ಥಳೀಯ ಸಂಸ್ಥೆಗಳಲ್ಲಿನ ಸದರಿ ಸ್ವತ್ತುಗಳನ್ನು ಸಂರಕ್ಷಿಸಲು ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು
ಪೌರಾಡಳಿತ ನಿರ್ದೇಶನಾಲಯ
ಬೆಂಗಳೂರು

ಪ್ರತಿಯನ್ನು

01. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು
02. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು
02. ರಾಜ್ಯದ ಎಲ್ಲಾ ಆಯುಕ್ತರು, ಮಹಾನಗರಪಾಲಿಕೆಗಳು
02. ರಾಜ್ಯದ ಎಲ್ಲಾ ಪೌರಾಯುಕ್ತರು/ಮುಖ್ಯಾಧಿಕಾರಿಗಳು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಿಗೆ ಸೂಕ್ತ ಕ್ರಮಕ್ಕಾಗಿ
03. ಕಛೇರಿ ಪ್ರತಿ